ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತ್ತಿಲ್ಲದ ಪ್ರಶ್ನೆ : 1724

ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)

ಉತ್ತರಿಸುವ ದಿನಾಂಕ : 14/03/2022.

ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರ ಸಂ	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿರುವ ಪ್ರಾಥಮಿಕ, ಪ್ರೌಢಶಾಲೆಗಳಲ್ಲಿ ಇರುವ ಸಂಗೀತ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು;(ಪೂರ್ಣ ವಿವರ ನೀಡುವುದು)	**ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಸಂಬಂಧಿಸಿದಂತೆ:** ಮಂಜೂರಾದ ಸಂಗೀತ ಶಿಕ್ಷಕರ ಹುದ್ದೆಗಳ ಸಂಖ್ಯೆ:**259** **ಸರ್ಕಾರಿ ಪ್ರೌಢ ಶಾಲೆಗಳಿಗೆ ಸಂಬಂಧಿಸಿದಂತೆ:** ಮಂಜೂರಾದ ಸಂಗೀತ ಶಿಕ್ಷಕರ ಹುದ್ದೆಗಳ ಸಂಖ್ಯೆ:**763**
ಆ)	ಸದರಿ ಹುದ್ದೆಗಳಲ್ಲಿ ಕಾರ್ಯನಿರತ ಶಿಕ್ಷಕರು ನಿವೃತ್ತರಾದ ನಂತರ ಆ ಹುದ್ದೆಗಳನ್ನು ರದ್ದುಪಡಿಸಲಾಗುತ್ತಿದೆಯೇ; ಅಥವಾ ಬಡ್ತಿ / ವರ್ಗಾವಣೆ ಮೂಲಕ ತುಂಬಲಾಗುತ್ತಿದೆಯೇ;	**ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಸಂಬಂಧಿಸಿದಂತೆ:** ಸದರಿ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರು ನಿವೃತ್ತರಾದ ನಂತರ ಹುದ್ದೆಗಳನ್ನು ರದ್ದುಪಡಿಸಲಾಗುತ್ತಿಲ್ಲ. ಸರ್ಕಾರಿ ಪ್ರೌಢಶಾಲಾ ಶಿಕ್ಷಕರ ವೃಂದ ಮತ್ತು ನೇಮಕಾತಿ ನಿಯಮ 2016ರನ್ವಯ ಲಭ್ಯವಿರುವ ಖಾಲಿ ಹುದ್ದೆಗಳಲ್ಲಿ ಶೇ.75% ಹುದ್ದೆಗಳನ್ನು ನೇರ ನೇಮಕಾತಿಗೆ ಹಾಗೂ ಶೇ.25% ಹುದ್ದೆಗಳಿಗೆ ಬಡ್ತಿ ನೀಡಲು ಪ್ರಾಥಮಿಕ ಶಾಲಾ ಸಂಗೀತ ಶಿಕ್ಷಕರನ್ನು ಪರಿಗಣಿಸಲಾಗುವುದು. ಖಾಲಿ ಹುದ್ದೆಗಳಿಗೆ ವರ್ಗಾವಣೆ ಹೊಂದಲು ಅವಕಾಶವಿರುತ್ತದೆ.
ಇ)	ಸದರಿ ಶಿಕ್ಷಕರಿಗೆ ಕಾಲಕಾಲಕ್ಕೆ ಬಡ್ತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಪ್ರಾಥಮಿಕ ಶಾಲಾ ಶಿಕ್ಷಕರ ವೃಂದದಿಂದ ಪ್ರೌಢಶಾಲಾ ಸಹ ಶಿಕ್ಷಕರು ಗ್ರೇಡ್–2 ವೃಂದಕ್ಕೆ ಬಡ್ತಿ ನೀಡುವ ಸಂಬಂಧ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯಲ್ಲಿ ದಾಖಲಾಗಿದ್ದ ಅರ್ಜಿ ಸಂಖ್ಯೆ:3443–3503/2020 ಮತ್ತು 857–917/2021ರ ಪ್ರಕರಣದ ತೀರ್ಪಿನಲ್ಲಿ ಈ ಹಿಂದೆ 1–5ನೇ ತರಗತಿಯ 7000 ಶಿಕ್ಷಕರಿಗೆ ಪ್ರೌಢ ಸಹ ಶಿಕ್ಷಕರ ಗ್ರೇಡ್–2 ಹುದ್ದೆಗೆ ಬಡ್ತಿ ನೀಡಲಾಗಿದ್ದು, ಸದರಿ ಶಿಕ್ಷಕರನ್ನು ಹಿಂಬಡ್ತಿಗೊಳಿಸುವಂತೆ ಆದೇಶಿಸಿದ್ದು ಈ ಪ್ರಯುಕ್ತ ಇದನ್ನು ಪ್ರಶ್ನಿಸಿ ಮಾನ್ಯ ಸರ್ಕಾರವು ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ:16936/2021 ದಾಖಲಿಸಿದ್ದು, ಅಂತಿಮ ತೀರ್ಪು ಬಂದ ನಂತರ ಕಾಲಕಾಲಕ್ಕೆ ಬಡ್ತಿ ನೀಡಲು ಕ್ರಮ ಕೈಗೊಳ್ಳಲಾಗುವುದು.
ಈ)	ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಬಡ್ತಿ ನೀಡಲಾಗುವುದು;	
ಉ)	ಎಲ್ಲಾ ಪ್ರಾಥಮಿಕ, ಪ್ರೌಢಶಾಲೆಗಳಲ್ಲಿ ಸಂಗೀತ ಶಿಕ್ಷಕರ ಹುದ್ದೆಗಳನ್ನು ಸೃಜಿಸಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ?	ಪ್ರಾಥಮಿಕ ಶಾಲೆಗೆ ಸಂಬಂಧಿಸಿದಂತೆ, 82 ಸಂಗೀತ ಶಿಕ್ಷಕರ ಹುದ್ದೆಗೆ ಹಾಗೂ ಪ್ರೌಢ ಶಾಲೆಗೆ ಸಂಬಂಧಿಸಿದಂತೆ, 130 ಸಂಗೀತ ಶಿಕ್ಷಕರ ನೇಮಕಾತಿಗೆ ಸಂಬಂಧಿಸಿದಂತೆ, ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ.

ಸಂಖ್ಯೆ: ಇಪಿ 40 ಎಲ್‌ಬಿಪಿ 2022

(ಬಿ.ಸಿ.ನಾಗೇಶ್)

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ

ಹಾಗೂ ಸಕಾಲ ಸಚಿವರು